**ದಿನಾಂಕ 17.06.2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ- ಶ್ರೀ ಹೆಚ್ ಎನ್ ಬಿ ಎನ್ . ವಾದಿಯ ಪರ ವಕೀಲರಿಂದಃ-**

ನನ್ನ ಮುಖ್ಯ **ವಿಚಾರಣೆಯ ಭಾಗವಾಗಿ ಪ್ರಮಾಣ ಪತ್ರವನ್ನು ಹಾಜರು ಪಡಿಸಿದ್ದು, ಅದರಲ್ಲಿರುವ ಸಂಗತಿಗಳು ನಿಜ ಇರುತ್ತವೆ. ಅವು ನನ್ನ ಮಾಹಿತಿ ಪ್ರಕಾರ ಇರುತ್ತವೆ. ಅವುಗಳನ್ನು ನಾನೇ ಹೇಳಿ ಬರೆಸಿರುತ್ತೇನೆ.**

ಈ ಪ್ರಕರಣದಲ್ಲಿ ನಾನು ನನ್ನ ಮತ್ತು ಪ್ರತಿವಾದಿಯರ ವಂಶವೃಕ್ಷ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದು ನಿಪಿ 1 ಎಂದು, ದಾವಾ ಆಸ್ತಿಗೆ ಸಂಬಂದಿಸಿದ ಪಹಣಿ ಪತ್ರಿಕೆಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ 2 ರಿಂದ 12 ಎಂದು, ದಾನ ಪತ್ರದ ದೃಡೀಕೃತ ನಕಲನ್ನು ಹಾಜರುಪಡಿಸಿದ್ದು ನಿಪಿ 13 ಎಂದು, ದಿಃ 25.01.2018 ರಂದು ತಹಶೀಲ್ದಾರರಿಗೆ ಕೊಟ್ಟ ಅರ್ಜಿಯ ಪ್ರತಿಯನ್ನು ಹಾಜರುಪಡಿಸಿದ್ದು ನಿಪಿ 14 ಎಂದು, ತಹಶೀಲ್ದಾರ್ ಕಚೇರಿಯಿಂದ ಬಂದ ತಿಳುವಳಿಕೆ ಪತ್ರದ ಪ್ರತಿಯನ್ನು ಹಾಜರುಪಡಿಸಿದ್ದು ನಿಪಿ 15 ಎಂದು, ನನ್ನ ಗಂಡನ ಮರಣ ಪ್ರಮಾಣ ಪತ್ರದ ಪ್ರತಿಯನ್ನು ಹಾಜರುಪಡಿಸಿದ್ದು ನಿಪಿ 16 ಎಂದು ಗುರುತಿಸಲಾಯಿತು.

ಆದ್ದರಿಂದ ನನ್ನ ಫ್ರಾರ್ಥನೆಯನ್ನು ಡಿಕ್ರಿ ಮಾಡಬೇಕಾಗಿ ವಿನಂತಿ.

ಪಾಟೀಸವಾಲುಃ ಪ್ರತಿವಾದಿ ಮತ್ತು ಪ್ರತಿವಾದಿ ಪರ ವಕಿಲರು ಗೈರುಹಾಜರಿದ್ದು ಪಾಟೀಸವಾಲಿಗಾಗಿ ಅವಕಾಶ ಕೊಟ್ಟು ಮುಂದೂಡಲಾಯಿತು.

(ತೆ ನ್ಯಾದಲ್ಲಿ ಬೆರಳಚ್ಚುಗೊಳಿಸಲಾಯಿತು)
ಓ ಹೇ ಕೇ ಸರಿ ಇದೆ

**ಹಿರಿಯ ದಿವಾಣಿ ನ್ಯಾಯಾಧೀಶರು,**
**ತಿ.ನರಸೀಪುರ.**